## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೇಂದ್ರ ಸರ್ಕಾರದ OWS (Other Welfare Scheme) ಯೋಜನೆಯಡಿ ಸಹಾಯಧನಯುಕ್ತ ಆಹಾರ ಧಾನ್ಯಗಳನ್ನು ಪಡೆಯುವ ಕಲ್ಯಾಣ ಸಂಸ್ಥೆಗಳಿಗೆ "ದಾಸೋಹ" ಯೋಜನೆಯಡಿ ಉಚಿತವಾಗಿ ಆಹಾರ ಧಾನ್ಯ ವಿತರಣೆ ಮಾಡುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂ: ಆನಾಸ 74 ಆನಾಸ 2002, ಬೆಂಗಳೂರು ದಿನಾಂಕ: 18.05.2002.

ಪ್ರಸ್ತಾವನೆ:

ಮೇಲೆ ಓದಲಾದ ಆದೇಶದಲ್ಲಿ ಕೇಂದ್ರ ಸರ್ಕಾರದ OWS (Other Welfare Scheme) ಯೋಜನೆಯಡಿ ಕಲ್ಯಾಣ ಸಂಸ್ಥೆಗಳನ್ನು ಗುರುತಿಸಿ ಸಹಾಯಧನಯುಕ್ತ ಆಹಾರಧಾನ್ಯ ಹಂಚಿಕೆ ನೀಡುವ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

ಕೇಂದ್ರ ಸರ್ಕಾರವು OWS (Other Welfare Scheme) ಯೋಜನೆಯಡಿ ರಾಜ್ಯಗಳಿಗೆ ಆಹಾರ ಧಾನ್ಯಗಳನ್ನು ಬಿಪಿಎಲ್ ದರಗಳಲ್ಲಿ ಅಂದರೆ, ಪ್ರತಿ ಕೆ.ಜಿ ಅಕ್ಕಿಯನ್ನು ರೂ: 5.65 ರಂತೆ ಮತ್ತು ಪ್ರತಿ ಕೆ.ಜಿ ಗೋಧಿಯನ್ನು ರೂ: 4.15 ರ ದರಗಳಲ್ಲಿ ಒದಗಿಸುತ್ತಿದೆ.

ಸನ್ಮಾನ್ಯ ಮುಖ್ಯ ಮಂತ್ರಿಯವರು 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ದಾಸೋಹ ಯೋಜನೆಯಡಿ "ಕಲ್ಯಾಣ ಸಂಸ್ಥೆಗಳಾದ ನಾರಿನಿಕೇತನ, ವೃದ್ಧಾಶ್ರಮ, ಅಂಧ ಮಕ್ಕಳ ಶಾಲೆ, ಬಡ ವಿದ್ಯಾರ್ಥಿಗಳ ವಿದ್ಯಾರ್ಥಿ ನಿಲಯ, ಭಿಕ್ಷುಕರ ಪುನರ್ವಸತಿ ಕೇಂದ್ರ ಮುಂತಾದವುಗಳಿಗೆ ಅನ್ನಭಾಗ್ಯ ಮಾದರಿಯಂತೆಯೇ ಉಚಿತವಾಗಿ ಆಹಾರಧಾನ್ಯ ನೀಡಲಾಗುವುದು" ಎಂದು ಘೋಷಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ OWS ಯೋಜನೆಯಡಿ ಕೇಂದ್ರ ಸರ್ಕಾರದಿಂದ ಸಹಾಯಧನಯುಕ್ತ ಆಹಾರ ಧಾನ್ಯಗಳನ್ನು ಖರೀದಿಸಿ, ಕಲ್ಯಾಣ ಸಂಸ್ಥೆಗಳಿಗೆ ಉಚಿತವಾಗಿ ವಿತರಿಸಲು ತೀರ್ಮಾನಿಸಿದ್ದು, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂ: ಆನಾಸ 14 ಆನಾಸ 2017, ಬೆಂಗಳೂರು**
**ದಿನಾಂಕ: 20.05.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರದ OWS (Other Welfare Scheme) ಯೋಜನೆಯಡಿ ಕಲ್ಯಾಣ ಸಂಸ್ಥೆಗಳಿಗೆ ನೀಡಲಾಗುವ ಸಹಾಯಧನಯುಕ್ತ ಆಹಾರಧಾನ್ಯಗಳನ್ನು ಖರೀದಿಸಿ "ದಾಸೋಹ" ಯೋಜನೆಯಡಿ ರಾಜ್ಯದ ಕಲ್ಯಾಣ ಸಂಸ್ಥೆಗಳಿಗೆ ಉಚಿತವಾಗಿ ಆಹಾರಧಾನ್ಯಗಳನ್ನು ವಿತರಿಸಲು ಆದೇಶಿಸಿದೆ.

ಈ ಆದೇಶವು ತಕ್ಷಣದಿಂದ ಜಾರಿಗೆ ಬರತಕ್ಕದ್ದು.

'ದಾಸೋಹ' ಯೋಜನೆಗೆ ತಗಲುವ ವೆಚ್ಚವನ್ನು ಆಹಾರಧಾನ್ಯಗಳ ಸಹಾಯಧನ ಲೆಕ್ಕಶೀರ್ಷಿಕೆಯಡಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 378 ವೆಚ್ಚ-5/2017 ದಿನಾಂಕ 06.04.2017 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂ: ಪಿಡಿ 19 ಐಎಂಎಂ 2017 ದಿನಾಂಕ: 25.04.2017ರ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

ಅರ್ಚನ ಎಂ.ಎಸ್
(ಅರ್ಚನ ಎಂ.ಎಸ್) 29/5/2017
ಸರ್ಕಾರದ ಅಧೀನ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ
ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಈ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಅದರ 200 ಪ್ರತಿಗಳನ್ನು ಒದಗಿಸಲು ಕೋರಿದೆ.

ಪ್ರತಿ:

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ಎಸ್ಎ), ಕರ್ನಾಟಕ ಹೊಸ ಕಟ್ಟಡ "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ. 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು, (ಇ & ಆರ್ಎಸ್ಎ), ಕರ್ನಾಟಕ ಹೊಸ ಕಟ್ಟಡ "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ. 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ. 5392, ಬೆಂಗಳೂರು-560001.
4. ಆಯುಕ್ತರು, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
7. ಸರ್ಕಾರದ ಉಪ ಕಾರ್ಯದರ್ಶಿಗಳು, ಸಚಿವ ಸಂಪುಟ ಶಾಖೆ (ಪ್ರಕರಣ ಸಂಖ್ಯೆ: ಸಿ:278/2017, ದಿನಾಂಕ 17.05.2017).
8. ಸರ್ಕಾರದ ಉಪ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 5). ವಿಧಾನಸೌಧ, ಬೆಂಗಳೂರು.
10. ಎಲ್ಲಾ ಉಪ ನಿರ್ದೇಶಕರು, ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ-ಆಯುಕ್ತರು, ಆನಾಸ ಮತ್ತು ಗ್ರಾವ್ಯ ಇಲಾಖೆ ಇವರ ಮುಖಾಂತರ.
11. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ-ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ ಇವರ ಮುಖಾಂತರ
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:-

1) ಸನ್ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿಗಳು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.